ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಕರ್ನಾಟಕ ವಿಧಾನ ಮಂಡಲ ಅಧಿವೇಶನ

ಪತ್ರಿಕೆಯ ಹೆಸರು : NAME OF THE NEWS PAPER: ವಿಶ್ವವಾಣಿ    ದಿನಾಂಕ : DATE : 17/02/2020

# ಜಂಗಿಕುಸ್ತಿಗೆ ಜಂಟಿ ಅಧಿವೇಶನ ಸಜ್ಜು

17/2/2020

**ವಿಶ್ವವಾಣಿ ಸುದ್ದಿಮನೆ** ಬೆಂಗಳೂರು

ಒಂದೆಡೆ ಜಂಟಿ ಅಧಿವೇಶನವನ್ನು ಉದ್ದೇಶಿಸಿ ಮಾತನಾಡಲಿರುವ ರಾಜ್ಯಪಾಲರ ಭಾಷಣಕ್ಕೆ ಇಡೀ ಆಡಳಿತ ವರ್ಗ ಸಿದ್ಧತೆ ನಡೆಸಿಕೊಂಡಿದ್ದರೆ, ಬಿಜೆಪಿ-ಕಾಂಗ್ರೆಸ್ ರಾಜಕೀಯ ಮೇಲಾಟಕ್ಕೂ ವೇದಿಕೆ ಸಿದ್ಧಗೊಂಡಿದೆ.

- ಸರಕಾರವನ್ನು ಇಕ್ಕಟ್ಟಿಗೆ ಸಿಲುಕಿಸಲು ಕೈ ತಂತ್ರ
- ಕಾಂಗ್ರೆಸ್ ತಂತ್ರಕ್ಕೆ ಪ್ರತಿತಂತ್ರ ರೂಪಿಸಿರುವ ಬಿಜೆಪಿ
- ಸೋಮವಾರ ಅಧಿವೇಶನಕ್ಕೂ ಮೊದಲು ಜೆಡಿಎಸ್ ಸಭೆ

ಉಭಯ ಪಕ್ಷಗಳು ಈ ಅಧಿವೇಶನದಲ್ಲಿ ಮೇಲುಗೈ ಸಾಧಿಸಬೇಕು ಎನ್ನುವ ಉದ್ದೇಶದಿಂದ ರಣತಂತ್ರಗಳನ್ನು ರೂಪಿಸಿಕೊಂಡಿದ್ದು, ಕಾಂಗ್ರೆಸ್ ನಾಯಕರು ಸರಕಾರವನ್ನು ಇಕ್ಕಟ್ಟಿಗೆ ಸಿಲುಕಿಸಲು ಸುಧೀರ್ಘ ಚರ್ಚೆ ನಡೆಸಿದ್ದರೆ, ಬಿಜೆಪಿ ನಾಯಕರು ಸರಕಾರವನ್ನು ಸಮರ್ಥಿಸಿಕೊಳ್ಳುವ ನಿಟ್ಟಿನಲ್ಲಿ ಭಾನುವಾರ ಶಾಸಕಾಂಗ ಪಕ್ಷದ ಸಭೆ ನಡೆಸಿದ್ದಾರೆ.

ಅಧಿವೇಶನದ ಮೊದಲ ದಿನ ರಾಜ್ಯಪಾಲರ ಭಾಷಣವಿರುವುದರಿಂದ ಪ್ರತಿಪಕ್ಷ ಕಾಂಗ್ರೆಸ್‌ಗೆ ಪ್ರತಿಭಟನೆ ನಡೆಸಲು ಅಥವಾ ಸರಕಾರದ ವಿರುದ್ಧ ಮಾತನಾಡಲು ಅವಕಾಶ ಸಿಗುವುದಿಲ್ಲ. ಆದರೆ ಮಂಗಳವಾರದಿಂದ ಸರಕಾರದ ವಿಫಲತೆಗಳನ್ನು ಇಟ್ಟುಕೊಂಡು ಹೋರಾಟ ನಡೆಸಲಿದೆ.

→ 5

## ಆಡಳಿತ-ವಿರೋಧ ಪಕ್ಷದ ಅಜೆಂಡಾ ಏನು?

| ಬಿಜೆಪಿ | ಕಾಂಗ್ರೆಸ್ |
|---|---|
| ಎಲ್ಲ ಶಾಸಕರು ಕಡ್ಡಾಯವಾಗಿ ಹಾಜರಿರಬೇಕು | ಸಿಂಗ್‌ಗೆ ನೀಡಿರುವ ಅರಣ್ಯ ಖಾತೆ ಹಿಂಪಡೆಯಲು ಆಗ್ರಹ |
| ಪ್ರತಿಪಕ್ಷಗಳ ಟೀಕೆಗೆ ಎಲ್ಲರೂ ಮುಗಿಬೀಳುವುದು ಬೇಡ | ನೆರೆ ಪರಿಹಾರದಲ್ಲಿ ಲೋಪದೋಷವನ್ನಿಟ್ಟುಕೊಂಡು ಬಿಜೆಪಿ ವಿರುದ್ಧ ಮುಗಿಬೀಳುವ ಸಾಧ್ಯತೆ |
| ಬಿಲ್‌ಗಳಿಗೆ ಅನುಮೋದನೆ ಪಡೆಯುವಾಗ ಯಾವುದೇ ಕಾರಣಕ್ಕೂ ಗೈರಾಗಬೇಡಿ | ಸದನದಲ್ಲಿ ಎಲ್ಲರೂ ಕಡ್ಡಾಯವಾಗಿ ಹಾಜರಾಗಲು ಸೂಚನೆ |
| ಸದನ ನಡೆಯುವ ಅವಧಿಯಲ್ಲಿ ಅನಾವಶ್ಯಕ ಒಡಕು ಧ್ವನಿಯ ಮಾತುಗಳು ಸಲ್ಲ | ಬಿಲ್‌ಗಳಲ್ಲಿನ ಲೋಪದೋಷಗಳ ಬಗ್ಗೆ ಚರ್ಚೆಗೆ ಅವಕಾಶಕ್ಕೆ ಆಗ್ರಹ |
| ಸಚಿವರ, ಪಕ್ಷದ ವಿರುದ್ಧ ಟೀಕಿಸಿದರೆ, ಸಮರ್ಥಿಸಿಕೊಳ್ಳುವ ಜವಾಬ್ದಾರಿ ನಾಯಕರದ್ದು | ಸಾಲಮನ್ನಾ, ಅನುದಾನ ಕಡಿತದ ವಿಷಯ ಪ್ರಸ್ತಾಪಿಸಿ ಗದ್ದಲ ಸೃಷ್ಟಿ ಸಾಧ್ಯತೆ |

## ಇಂದು ಪರಿಷತ್ ಚುನಾವಣೆ

ವಿಧಾನ ಪರಿಷತ್ ಚುನಾವಣಾ ಕಣದಿಂದ ಪಕ್ಷೇತರ ಅಭ್ಯರ್ಥಿ ಅನಿಲ್ ಕುಮಾರ್ ಹಿಂದೆ ಸರಿದಿರುವ ಕಾರಣ ಸೋಮವಾರ ನೆಪಮಾತ್ರಕ್ಕೆ ಮತದಾನ ನಡೆಯಲಿದೆ. ಬೆ. 9ರಿಂದ 4 ಗಂಟೆವರೆಗೆ ವಿಧಾನಸೌಧದ ಮೊದಲನೇ ಮಹಡಿಯ ಕೊಠಡಿ ಸಂಖ್ಯೆ 105ರಲ್ಲಿ ಮತದಾನ ನಡೆಯಲಿದೆ. ಉಪಮುಖ್ಯಮಂತ್ರಿ ಲಕ್ಷ್ಮಣ ಸವದಿ ಆಡಳಿತಾರೂಢ ಬಿಜೆಪಿ ಅಭ್ಯರ್ಥಿಯಾಗಿ ಚುನಾವಣಾ ಕಣದಲ್ಲಿದ್ದಾರೆ. ವಿಧಾನ ಪರಿಷತ್ ಚುನಾವಣೆಗೆ ಪ್ರತಿಪಕ್ಷಗಳಾದ ಕಾಂಗ್ರೆಸ್ ಮತ್ತು ಜೆಡಿಎಸ್ ತಮ್ಮ ಅಭ್ಯರ್ಥಿಗಳನ್ನು ಕಣಕ್ಕಿಳಿಸಿಲ್ಲ. ಹೀಗಾಗಿ ಮತದಾನದಿಂದ ದೂರ ಉಳಿಯುವ ಸಾಧ್ಯತೆಯಿದೆ. ಬಿಜೆಪಿ ಶಾಸಕರು ಮತದಾನದಲ್ಲಿ ಪಾಲ್ಗೊಳ್ಳಲಿದ್ದಾರೆ. ಕಾಂಗ್ರೆಸ್ ಮತ್ತು ಜೆಡಿಎಸ್ ಮತದಾನದಿಂದ ದೂರ ಉಳಿಯುವುದರಿಂದ ಸವದಿ ಅವರ ಆಯ್ಕೆ ಬಹುತೇಕ ಖಚಿತವಾದಂತಾಗಿದೆ.

ವಿಷಯ: ಕರ್ನಾಟಕ ವಿಧಾನ ಮಂಡಲ ಅಧಿವೇಶನ

ಪತ್ರಿಕೆಯ ಹೆಸರು: ವಿಶ್ವವಾಣಿ ದಿ: 17/02/2020

# ಜಂಗಿಕುಸ್ತಿಗೆ ಜಂಟಿ ಅಧಿವೇಶನ ಸಜ್ಜು

17/2/2020

← ಮೊದಲಪುಟದಿಂದ

ಈ ನಿಟ್ಟಿನಲ್ಲಿ ಭಾನುವಾರ ಕಾಂಗ್ರೆಸ್ ಶಾಸಕಾಂಗ ಸಭೆ ನಡೆಸಿದ್ದು, ಸೋಮವಾರ ಮತ್ತೊಂದು ಸುತ್ತಿನ ಸಭೆ ನಡೆಸಲಿದೆ ಎಂದು ತಿಳಿದುಬಂದಿದೆ.

ಆನಂದ್ ಸಿಂಗ್‌ಗೆ ಅರಣ್ಯ ಖಾತೆ ನೀಡಿರುವ ವಿಚಾರ, ಬೀದರ್‌ನಲ್ಲಿ ಮಹಿಳೆಯ ಮೇಲೆ ದೇಶದ್ರೋಹದ ಕೇಸ್ ದಾಖಲಿಸಿರುವ ವಿಚಾರದ ಬಗ್ಗೆ ಕಾಂಗ್ರೆಸ್ ಧ್ವನಿ ಎತ್ತುವುದು ಖಚಿತವಾಗುತ್ತಿದ್ದಂತೆ, ಬಿಜೆಪಿ ಇದಕ್ಕೆ ಅಗತ್ಯ ಪ್ರತಿತಂತ್ರವನ್ನು ಬಿಜೆಪಿ ಕಚೇರಿಯಲ್ಲಿ ನಡೆದ ಶಾಸಕಾಂಗ ಸಭೆಯಲ್ಲಿ ಹೆಣೆದಿದೆ.

**ಸಿಎಲ್‌ಪಿ ಮೊದಲು ಹಿರಿಯರ ಸಭೆ:** ಖಾಸಗಿ ಹೋಟೇಲ್‌ನಲ್ಲಿ ಆಯೋಜಿಸಿದ್ದ ಕಾಂಗ್ರೆಸ್ ಶಾಸಕಾಂಗ ಸಭೆಗೂ ಮೊದಲು ಪ್ರತಿಪಕ್ಷ ನಾಯಕ ಸಿದ್ದರಾಮಯ್ಯ ಅವರು ಕೆಪಿಸಿಸಿ ಅಧ್ಯಕ್ಷ ದಿನೇಶ್ ಗುಂಡೂರಾವ್, ಮಾಜಿ ಸಚಿವ ಡಿ.ಕೆ.ಶಿವಕುಮಾರ್, ಡಾ. ಜಿ.ಪರಮೇಶ್ವರ, ಎಚ್.ಕೆ.ಪಾಟೀಲ್ ಸೇರಿದಂತೆ ಕೆಲ ಪ್ರಮುಖರು ಸಿದ್ದರಾಮಯ್ಯ ಅವರ ನಿವಾಸದಲ್ಲಿ ಸಭೆ ನಡೆಸಿದರು. ಈ ವೇಳೆ ಹಿರಿಯ ನಾಯಕರ ನಡುವೆ ಸದನದ ಒಳಗೆ ಅಥವಾ ಹೊರಗೆ ಭಿನ್ನಧ್ವನಿ ಬರಬಾರದು. ಬಿಜೆಪಿಯನ್ನು ಇಕ್ಕಟ್ಟಿಗೆ ಸಿಲುಕಿಸಲು ಹಲವು ವಿಷಯಗಳಿದ್ದು, ಅವುಗಳನ್ನೆಲ್ಲ ಒಂದಾಗಿ ಪ್ರಸ್ತಾಪಿಸಬೇಕು. ಒಂದೇ ಬಾರಿಗೆ ಎಲ್ಲವನ್ನೂ ಚರ್ಚಿಸುವುದು ಬೇಡ ಎನ್ನುವ ನಿರ್ಧಾರಕ್ಕೆ ಬರಲಾಗಿದೆ.

ಇದರೊಂದಿಗೆ ಪ್ರಮುಖವಾಗಿ ಈ ವಾರದಲ್ಲಿ ಕೆಪಿಸಿಸಿ ಅಧ್ಯಕ್ಷರ ನೇಮಕದ ಬಗ್ಗೆ ಅಧಿಕೃತ ಆದೇಶ ಹೊರಬೀಳುವ ಸಾಧ್ಯತೆಯಿರುವುದರಿಂದ ಯಾರಿಗೇ ಅಧ್ಯಕ್ಷ ಸ್ಥಾನ ಸಿಕ್ಕರೂ ಇನ್ನುಳಿದ ಆಕಾಂಕ್ಷಿಗಳು ಪಕ್ಷದ ವಿರುದ್ಧ ಮಾತನಾಡಬಾರದು. ಒಂದು ವೇಳೆ ಅಸಮಾಧಾನವಿದ್ದರೆ ಅದನ್ನು ನೇರವಾಗಿ ವರಿಷ್ಠರ ಬಳಿ ಅಥವಾ ನೂತನ ಅಧ್ಯಕ್ಷರ ಬಳಿ ಹೇಳಿಕೊಳ್ಳಬೇಕು ಎಂಬ ಚರ್ಚೆ ನಡೆಸಲಾಯಿತು ಎಂದು ತಿಳಿದುಬಂದಿದೆ.

## ಇಂದು ಜೆಡಿಎಸ್ ಸಭೆ

ಅಧಿವೇಶನದಲ್ಲಿ ಯಾವ ರೀತಿ ಇರಬೇಕು ಎನ್ನುವ ವಿಚಾರಕ್ಕೆ ಸಂಬಂಧಿಸಿದಂತೆ ರಾಷ್ಟ್ರೀಯ ಪಕ್ಷಗಳು ಸುದೀರ್ಘ ಶಾಸಕಾಂಗ ಸಭೆಗಳನ್ನು ನಡೆಸಿದ್ದರೆ, ಇತ್ತ ಜೆಡಿಎಸ್‌ನಲ್ಲಿ ಈ ಬಗ್ಗೆ ಯಾವುದೇ ಬೆಳವಣಿಗೆ ಕಾಣಿಸಿಲ್ಲ. ಸೋಮವಾರ ಬೆಳಗ್ಗೆ 9 ಗಂಟೆಗೆ ನೆಪಮಾತ್ರಕ್ಕೆ ಶಾಸಕಾಂಗ ಸಭೆ ನಡೆಸಲು ತೀರ್ಮಾನಿಸಿದೆ ಎಂದು ತಿಳಿದುಬಂದಿದೆ. ಪಕ್ಷದಲ್ಲಿ ಶಾಸಕರ ನಿಲುವಿಗೆ ಅಂತಹ ಮಹತ್ವ ಸಿಗುತ್ತಿಲ್ಲ ಕೇವಲ ದೇವೇಗೌಡರ ಕುಟುಂಬದವರು ತಗೆದುಕೊಳ್ಳುವ ನಿರ್ಧಾರಕ್ಕೆ ಅನುಗುಣವಾಗಿ ಪಕ್ಷ ನಡೆಯುವುದರಿಂದ, ಶಾಸಕರೂ ಈ ಬಗ್ಗೆ ಹೆಚ್ಚು ಗಮನಹರಿಸಿಲ್ಲ ಎನ್ನುವ ಮಾತುಗಳು ಕೇಳಿಬಂದಿದೆ.